Azadi Ka Amrit Mahotsav

ಕರ್ನಾಟಕಸರ್ಕಾರ

ಸಾರ್ವಜನಿಕ ಶಿಕ್ಷಣ ಇಲಾಖೆ, ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು – 560001

ಸಂಖ್ಯೆ: ಸಿ3(4)ನಿ.ಹು.ಅ.ಪ:77/2020-21 ದಿನಾಂಕ: 14.06.2022

## :: ಅಧಿಕೃತ ಜ್ಞಾಪನ ::

ವಿಷಯ: 2021-22 ನೇ ಸಾಲಿಗೆ ಸರ್ಕಾರಿ ಪ್ರಾಥಮಿಕ, ಪ್ರೌಢಶಾಲಾ ಸಹಶಿಕ್ಷಕರು ಮತ್ತು ಮುಖ್ಯ ಶಿಕ್ಷಕರು/ತತ್ಸಮಾನ ವೃಂದದ ನಿರ್ದಿಷ್ಟಪಡಿಸಿದ ಹುದ್ದೆಗಳ ಆಯ್ಕೆಗೆ ಲಿಖಿತ ಪರೀಕ್ಷೆಗಳಲ್ಲಿ ಕನಿಷ್ಠ ಅಂಕಗಳ ನಿಯಮವನ್ನು ಸಡಿಲಗೊಳಿಸಿ ಖಾಲಿ ಉಳಿದಿರುವ ಹುದ್ದೆಗಳನ್ನು ಮೆರಿಟ್ ಆಧಾರದ ಮೇಲೆ ನೇಮಕಾತಿ ನಡೆಸಲು ಕೌನ್ಸಿಲಿಂಗ್ ವೇಳಾಪಟ್ಟಿಯನ್ನು ಅಧಿಸೂಚಿಸುವ ಬಗ್ಗೆ

ಉಲ್ಲೇಖ: 1. ಸಮ ಸಂಖ್ಯೆಯ ಈ ಜ್ಞಾಪನ ದಿನಾಂಕ:07.12.2021

2. ಸರ್ಕಾರದ ಆದೇಶ ಸಂಖ್ಯೆ:ಇಪಿ 264 ಪಿಬಿಎಸ್ 2022 ದಿನಾಂಕ:01.06.2022

-&&&-

ವಿಷಯಕ್ಕೆ ಸಂಬಂಧಿಸಿದಂತೆ 2021-22 ನೇ ಸಾಲಿಗೆ ಸರ್ಕಾರಿ ಪ್ರಾಥಮಿಕ, ಪ್ರೌಢಶಾಲಾ ಸಹಶಿಕ್ಷಕರು ಮತ್ತು ಮುಖ್ಯ ಶಿಕ್ಷಕರು/ತತ್ಸಮಾನ ವೃಂದದ ನಿರ್ದಿಷ್ಟಪಡಿಸಿದ ಹುದ್ದೆಗಳಿಗೆ (Specified Post) ಲಿಖಿತ ಪರೀಕ್ಷೆ ನಡೆಸುವ ಮೂಲಕ ಭರ್ತಿ ಮಾಡುವ ಸಂಬಂಧ ಉಲ್ಲೇಖ(1)ರಲ್ಲಿ ಜ್ಞಾಪನ ಹೊರಡಿಸಿ ಲಿಖಿತ ಪರೀಕ್ಷೆ ಮುಖಾಂತರ ಆಯ್ಕೆ ಪ್ರಕ್ರಿಯೆ ಹಮ್ಮಿಕೊಂಡು ಆನ್‌ಲೈನ್ ಕೌನ್ಸಿಲಿಂಗ್ ಪ್ರಕ್ರಿಯೆ ಮೂಲಕ ಸ್ಥಳನಿಯುಕ್ತಿಗೊಳಿಸಲಾಗಿರುತ್ತದೆ.

ಆದರೆ ಬಹುತೇಕ ಜಿಲ್ಲೆಗಳಲ್ಲಿ, ಬಹುತೇಕ ಹುದ್ದೆಗಳು ಖಾಲಿ ಉಳಿದಿದ್ದು 2022-23ನೇ ಸಾಲಿನ ಶೈಕ್ಷಣಿಕ ವರ್ಷವು ಪ್ರಾರಂಭವಾಗಿರುತ್ತದೆ. ನಿರ್ದಿಷ್ಟಪಡಿಸಿದ ಹುದ್ದೆಗಳು ಖಾಲಿ ಉಳಿದಿದ್ದರೆ ಮಕ್ಕಳ ಸಾರ್ವತ್ರಿಕ ದಾಖಲಾತಿ/ಹಾಜರಾತಿ, ಪ್ರೋತ್ಸಾಹದಾಯಕ ಯೋಜನೆಗಳ ಅನುಷ್ಠಾನ, ಶಿಕ್ಷಣದ ಗುಣಮಟ್ಟವನ್ನು ಉತ್ತಮಪಡಿಸುವಲ್ಲಿ ಅನುಷ್ಠಾನ/ಮೇಲ್ವಿಚಾರಣೆ/ಉಸ್ತುವಾರಿ ಮತ್ತು ಮಾರ್ಗದರ್ಶನಕ್ಕೆ ಕೊರತೆಯಾಗುವ ಹಿನ್ನೆಲೆಯಲ್ಲಿ ಉಲ್ಲೇಖ(2)ರ ಸರ್ಕಾರದ ಆದೇಶದಂತೆ **"ಸದರಿ ನಿರ್ದಿಷ್ಟ ಹುದ್ದೆಗಳಿಗೆ ಪರೀಕ್ಷೆಗೆ ನಿರ್ದಿಷ್ಟಪಡಿಸಲಾಗಿದ್ದ ಪತ್ರಿಕೆ-01 ಮತ್ತು ಪತ್ರಿಕೆ-02ರಲ್ಲಿನ ಶೇಕಡಾ 50ರ ನಿಯಮವನ್ನು ಸಡಿಲಿಸಿ, ದಿನಾಂಕ:22.04.2022 ರಂದು ನಡೆದ ಕೌನ್ಸಿಲಿಂಗ್ ಪ್ರಕ್ರಿಯೆ ನಂತರದಲ್ಲಿ ಖಾಲಿ ಉಳಿದಿರುವ ಹುದ್ದೆಗಳನ್ನು ಮೆರಿಟ್ ಆಧಾರದದಲ್ಲಿ ನೇಮಕಾತಿ ನಡೆಸಲು, ಗುಣಾತ್ಮಕ ಶಿಕ್ಷಣ ಅನುಪಾಲನೆಗೆ ಯಾವುದೇ ತೊಂದರೆಯಾಗದ ರೀತಿಯಲ್ಲಿ ಕ್ರಮವಹಿಸಬೇಕಾಗಿದ್ದು"** ಅದರಂತೆ ವೇಳಾಪಟ್ಟಿಯಂತೆ ಕ್ರಮಗಳನ್ನು ಅಧಿಸೂಚಿಸಿದೆ.

ಸದರಿ ಕ್ರಮಗಳನ್ನು ಕೈಗೊಳ್ಳುವಾಗ ಕೆಳಗಿನ ನಿರ್ದಿಷ್ಟ ಸೂಚನೆಯನ್ನು ಮತ್ತು ಹುದ್ದೆಗಳಿಗೆ ಸಂಬಂಧಪಟ್ಟಂತೆ ಅಧಿಸೂಚಿತ ಇತರೆ ಸಾಮಾನ್ಯ ನಿಯಮಗಳನ್ನು ಪಾಲಿಸತಕ್ಕದ್ದು.

1. ಖಾಲಿ ಹುದ್ದೆಗಳ ಪಟ್ಟಿಯನ್ನು ಪ್ರಕಟಿಸುವಾಗ ದಿನಾಂಕ:31.05.2022ರ ವರೆಗೆ ವಿವಿಧ ಕಾರಣಗಳಿಂದ ತೆರವಾದ ಖಾಲಿ ಹುದ್ದೆಗಳನ್ನು ಪ್ರಕಟಿಸಲು ಕ್ರಮವಹಿಸುವುದು.
2. ಪತ್ರಿಕೆ-01 ಮತ್ತು ಪತ್ರಿಕೆ-02 ರಲ್ಲಿನ ಶೇಕಡಾ 50ರ ನಿಯಮವನ್ನು ಮಾತ್ರ ಸಡಿಲಿಸಿದ್ದು ಇತರೆ ಎಲ್ಲಾ ನಿಯಮಗಳು ಕಡ್ಡಾಯವಾಗಿ ಅನ್ವಯವಾಗುತ್ತದೆ.
3. ದಿನಾಂಕ:22.04.2022 ರಂದು ನಡೆದ ಕೌನ್ಸಿಲಿಂಗ್ ಪ್ರಕ್ರಿಯೆಗೆ ಹಾಜರಾಗದ(Absent), ಹಾಜರಾಗಿ ಸ್ಥಳ ಆಯ್ಕೆ ಮಾಡಿಕೊಳ್ಳದ (Rejected) ಶಿಕ್ಷಕರಿಗೆ ಶಿಕ್ಷಕರಿಗೆ ಪ್ರಸ್ತುತ ಕೌನ್ಸಿಲಿಂಗ್ ಪ್ರಕ್ರಿಯೆಯಲ್ಲಿ ಭಾಗವಹಿಸಲು ಅವಕಾಶವಿರುವುದಿಲ್ಲ.
4. ಈಗಾಗಲೇ ಇಂಧೀಕರಿಸಿರುವ ಖಾಲಿ ಹುದ್ದೆಗಳನ್ನು ತಿದ್ದುಪಡಿ ಮಾಡಲು/ತೆಗೆದು ಹಾಕಲು ಸೂಕ್ತ ಕಾರಣಗಳನ್ನು ನೀಡಿದ್ದಲ್ಲಿ ಮಾತ್ರ ಅಂತಹ ಮನವಿಗಳನ್ನು ಪರಿಗಣಿಸಲಾಗುವುದು.

:: <u>ವೇಳಾಪಟ್ಟಿ</u> ::

| ಕ್ರ.ಸ | ವಿವರ | ಕ್ರಮವಹಿಸುವವರು. | ದಿನಾಂಕ |
|---|---|---|---|
| 1 | ದಿನಾಂಕ:31.05.2022 ರಲ್ಲಿದ್ದಂತೆ ಬಡ್ತಿ, ನಿವೃತ್ತಿ, ಮರಣ ಮತ್ತು ಇನ್ನಿತರೆ ಕಾರಣಗಳಿಂದ ತೆರವಾದ ಪ್ರಾಥಮಿಕ, ಪ್ರೌಢಶಾಲಾ ಸಹ ಶಿಕ್ಷಕರು ಮತ್ತು ಮುಖ್ಯ ಶಿಕ್ಷಕರು/ತತ್ಸಮಾನ ವೃಂದದ ಹುದ್ದೆಗಳ ಖಾಲಿ ಹುದ್ದೆ ಇಂಧೀಕರಣ | 1.ಪ್ರಾಥಮಿಕ ಮತ್ತು ಪ್ರೌಢಶಾಲಾ ಸಹಶಿಕ್ಷಕರ ವೃಂದದ ಹುದ್ದೆಗಳಿಗೆ ಆಯಾಯ ಜಿಲ್ಲಾ ಉಪನಿರ್ದೇಶಕರು [ಆಡಳಿತ]<br>2.ಸರ್ಕಾರಿ ಪ್ರೌಢಶಾಲಾ ಮುಖ್ಯ ಶಿಕ್ಷಕರ ವೃಂದದ ಹುದ್ದೆಗಳಿಗೆ ಆಯುಕ್ತರು ಸಾ.ಶಿ.ಇ ಬೆಂಗಳೂರು, ಅಪರ ಆಯುಕ್ತರು ಕಲಬುರಗಿ ಮತ್ತು ಧಾರವಾಡ. | 17.06.2022<br>ರಿಂದ<br>20.06.2022 |
| 2 | ಈಗಾಗಲೇ ಸ್ಥಳನಿಯುಕ್ತಿ ಹೊಂದಿರುವ ಸಹಶಿಕ್ಷಕರು ಮತ್ತು ಮುಖ್ಯ ಶಿಕ್ಷಕರನ್ನು ಹೊರತುಪಡಿಸಿ ಉಳಿದವರ ತಾತ್ಕಾಲಿಕ ಅರ್ಹತಾ ಪಟ್ಟಿ ಪ್ರಕಟಣೆ | 1.ಪ್ರಾಥಮಿಕ ಮತ್ತು ಪ್ರೌಢಶಾಲಾ ಸಹಶಿಕ್ಷಕರ ವೃಂದದ ಹುದ್ದೆಗಳಿಗೆ ಆಯಾಯ ಜಿಲ್ಲಾ ಉಪನಿರ್ದೇಶಕರು [ಆಡಳಿತ]<br>2.ಸರ್ಕಾರಿ ಪ್ರೌಢಶಾಲಾ ಮುಖ್ಯ ಶಿಕ್ಷಕರ ವೃಂದದ ಹುದ್ದೆಗಳಿಗೆ ಆಯುಕ್ತರು ಸಾ.ಶಿ.ಇ ಬೆಂಗಳೂರು, ಅಪರ ಆಯುಕ್ತರು ಕಲಬುರಗಿ ಮತ್ತು ಧಾರವಾಡ. | 18.06.2022 |
| 3 | ಮೇಲಿನಂತೆ ಪ್ರಕಟಿಸಿದ ತಾತ್ಕಾಲಿಕ ಅರ್ಹತಾ ಪಟ್ಟಿಗೆ ಆಕ್ಷೇಪಣೆಗಳ ಸಲ್ಲಿಸುವುದು | ಸಂಬಂಧಿಸಿದ ಸಹಶಿಕ್ಷಕರು ಮತ್ತು ಮುಖ್ಯ ಶಿಕ್ಷಕರು | 21.06.2022ರ<br>ಸಂಜೆ:05.30ರ<br>ಒಳಗಾಗಿ |
| 4 | ತಾತ್ಕಾಲಿಕ ಅರ್ಹತಾ ಪಟ್ಟಿಗೆ ಜಿಲ್ಲೆಗಳಿಂಧ ಸ್ವೀಕೃತವಾದ ಆಕ್ಷೇಪಣೆಗಳಿಗೆ ಕ್ರಮವಹಿಸಿ "ಅಂತಿಮ" ಅರ್ಹತಾ ಪಟ್ಟಿ ಪ್ರಕಟಣೆ | 1.ಪ್ರಾಥಮಿಕ ಮತ್ತು ಪ್ರೌಢಶಾಲಾ ಸಹಶಿಕ್ಷಕರ ವೃಂದದ ಹುದ್ದೆಗಳಿಗೆ ಆಯಾಯ ಜಿಲ್ಲಾ ಉಪನಿರ್ದೇಶಕರು [ಆಡಳಿತ]<br>2.ಸರ್ಕಾರಿ ಪ್ರೌಢಶಾಲಾ ಮುಖ್ಯ ಶಿಕ್ಷಕರ ವೃಂದದ ಹುದ್ದೆಗಳಿಗೆ ಆಯುಕ್ತರು ಸಾ.ಶಿ.ಇ ಬೆಂಗಳೂರು, ಅಪರ ಆಯುಕ್ತರು ಕಲಬುರಗಿ ಮತ್ತು ಧಾರವಾಡ. | 22.06.2022 |
| 5 | ಪ್ರಾಥಮಿಕ, ಪ್ರೌಢಶಾಲಾ ಸಹ ಶಿಕ್ಷಕರು ಮತ್ತು ಮುಖ್ಯ ಶಿಕ್ಷಕರು/ ತತ್ಸಮಾನ ವೃಂದದ ಖಾಲಿ ಹುದ್ದೆಗಳ ಪಟ್ಟಿ ಪ್ರಕಟಣೆ | 1.ಪ್ರಾಥಮಿಕ ಮತ್ತು ಪ್ರೌಢಶಾಲಾ ಸಹಶಿಕ್ಷಕರ ವೃಂದದ ಹುದ್ದೆಗಳಿಗೆ ಆಯಾಯ ಜಿಲ್ಲಾ ಉಪನಿರ್ದೇಶಕರು [ಆಡಳಿತ]<br>2.ಸರ್ಕಾರಿ ಪ್ರೌಢಶಾಲಾ ಮುಖ್ಯ ಶಿಕ್ಷಕರ ವೃಂದದ ಹುದ್ದೆಗಳಿಗೆ ಆಯುಕ್ತರು ಸಾ.ಶಿ.ಇ ಬೆಂಗಳೂರು, ಅಪರ ಆಯುಕ್ತರು ಕಲಬುರಗಿ ಮತ್ತು ಧಾರವಾಡ. | 23.06.2022 |
| 6 | ಪ್ರಾಥಮಿಕ, ಪ್ರೌಡಶಾಲಾ ಸಹ ಶಿಕ್ಷಕರು ಮತ್ತು ಮುಖ್ಯ ಶಿಕ್ಷಕರು/ತತ್ಸಮಾನ ವೃಂದದ ನಿಗಧಿಪಡಿಸಿರುವ ಹುದ್ದೆಗಳಿಗೆ ಒಳಬರುವ ಅಭ್ಯರ್ಥಿಗಳಿಗೆ ಕೌನ್ಸಿಲಿಂಗ್. | 1.ಪ್ರಾಥಮಿಕ ಮತ್ತು ಪ್ರೌಢಶಾಲಾ ಸಹಶಿಕ್ಷಕರ ವೃಂದದ ಹುದ್ದೆಗಳಿಗೆ ಆಯಾಯ ಜಿಲ್ಲಾ ಉಪನಿರ್ದೇಶಕರು [ಆಡಳಿತ]<br>2.ಸರ್ಕಾರಿ ಪ್ರೌಢಶಾಲಾ ಮುಖ್ಯ ಶಿಕ್ಷಕರ ವೃಂದದ ಹುದ್ದೆಗಳಿಗೆ ಆಯುಕ್ತರು ಸಾ.ಶಿ.ಇ ಬೆಂಗಳೂರು, ಅಪರ ಆಯುಕ್ತರು ಕಲಬುರಗಿ ಮತ್ತು ಧಾರವಾಡ. | 24.06.2022<br>ಪೂರ್ವಾಹ್ನ<br><br>24.06.2022<br>ಅಪರಾಹ್ನ |

| | | | |
|---|---|---|---|
| 7 | ಅಧಿಸೂಚಿತ ಪ್ರಾಥಮಿಕ ಮತ್ತು ಪ್ರೌಢ ಹುದ್ದೆಗಳಿಗೆ ಸ್ಥಳನಿಯುಕ್ತಿಗೊಳಿಸಿದ ಬಗ್ಗೆ ರಾಜ್ಯ ಕಛೇರಿಗೆ ವರದಿ ನೀಡುವುದು. | ಜಿಲ್ಲಾ ಉಪನಿರ್ದೇಶಕರು[ಆಡಳಿತ] | 27.06.2022 |

R 16/06/2022

(ಡಾ॥ ವಿಶಾಲ್. ಆರ್) ಭಾ.ಆ.ಸೇ.
ಆಯುಕ್ತರು
ಸಾ.ಶಿ.ಇ. ಬೆಂಗಳೂರು.

**ಇವರಿಗೆ :-**

1. ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ಜಿಲ್ಲಾ ಉಪನಿರ್ದೇಶಕರು (ಆಡಳಿತ) ರವರಿಗೆ ಮುಂದಿನ ಕ್ರಮಕ್ಕಾಗಿ.
2. ರಾಜ್ಯದ ಎಲ್ಲಾ ಪ್ರಾಂಶುಪಾಲರು ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆ (ಡಯಟ್) ರವರಿಗೆ,
3. ಹಿರಿಯ ಸಹಾಯಕ ನಿರ್ದೇಶಕರು, SATS ವಿಭಾಗ, ರಾಜ್ಯ ಯೋಜನಾ ನಿರ್ದೇಶಕರ ಕಛೇರಿ, ಸಮಗ್ರ ಶಿಕ್ಷಣ ಅಗತ್ಯ ಕ್ರಮಕ್ಕಾಗಿ
4. ಹಿರಿಯ ಸಹಾಯಕ ನಿರ್ದೇಶಕರು, ಇ-ಆಡಳಿತ ಘಟಕ, ಆಯುಕ್ತರ ಕಛೇರಿ, ಸಾ.ಶಿ.ಇಲಾಖೆ, ಬೆಂಗಳೂರು .
5. ಹಿರಿಯ ಸಹಾಯಕ ನಿರ್ದೇಶಕರು, ಇ.ಇ.ಡಿ.ಎಸ್ ಘಟಕ, ಆಯುಕ್ತರ ಕಛೇರಿ, ಸಾ.ಶಿ.ಇಲಾಖೆ, ಬೆಂಗಳೂರು

**ಪ್ರತಿಯನ್ನು :-**

1. ರಾಜ್ಯ ಯೋಜನಾ ನಿರ್ದೇಶಕರು, ಸರ್ವ ಶಿಕ್ಷಣ ಅಭಿಯಾನ/ ರಾಷ್ಟ್ರೀಯ ಮಾಧ್ಯಮಿಕ ಶಿಕ್ಷಣ ಅಭಿಯಾನ ರಾಜ್ಯ ಯೋಜನಾ ನಿರ್ದೇಶಕರ ಕಛೇರಿ ಬೆಂಗಳೂರು.
2. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಗುಲಬರ್ಗಾ.
3. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ .
4. ನಿರ್ದೇಶಕರು [ಪರೀಕ್ಷೆಗಳು], ಕೆ.ಎಸ್.ಇ.ಇ.ಬಿ. ಮಲ್ಲೇಶ್ವರಂ, ಬೆಂಗಳೂರು.
5. ನಿರ್ದೇಶಕರು (ಪ್ರಾಥಮಿಕ ಶಿಕ್ಷಣ) ಆಯುಕ್ತರ ಕಛೇರಿ ಸಾ.ಶಿ.ಇ ಬೆಂಗಳೂರು.
6. ನಿರ್ದೇಶಕರು (ಪ್ರೌಢ ಶಿಕ್ಷಣ) ಆಯುಕ್ತರ ಕಛೇರಿ ಸಾ.ಶಿ.ಇ ಬೆಂಗಳೂರು
7. ಅಧ್ಯಕ್ಷರು/ ಪ್ರಧಾನ ಕಾರ್ಯದರ್ಶಿ ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘ(ರಿ), ಬೆಂಗಳೂರು
8. ಕಛೇರಿ ಪ್ರತಿ